ಕೃಷಿ ಬೆಲೆ ನಿಗದಿ ಮಾಡುವ ಬಗ್ಗೆ

1351 - ಶ್ರೀ ಕೆ.ಎಸ್. ಪುಟ್ಟಣ್ಣಯ್ಯ (ಪಾಂಡವಪುರ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷಿ ಬೆಲೆಯ ನಿಗಧಿತ ನೀತಿ ಬಗ್ಗೆ ರೈತರ ಸಮಿತಿ ಮಾಡಲು (ಆಯಾಯ ಬೆಳೆಗಳಿಗೆ ಸಂಬಂಧಪಟ್ಟಂತೆ) ಸರ್ಕಾರ ನಿಲುವು ತೆಗೆದುಕೊಳ್ಳದಿರಲು ಕಾರಣಗಳೇನು;

ಆ) ಸದರಿ ಸಮಿತಿಯನ್ನು ಎಂದು ರಚಿಸಲಾಗುವುದು?

ಶ್ರೀ. ಸಿ. ಬೈರೇಗೌಡ (ಕೃಷಿ ಸಚಿವರು) :

ಅ) ಕೃಷಿ ಬೆಳೆಗಳಿಗೆ ಬೆಂಬಲ ಬೆಲೆಗಳನ್ನು ನಿಗಧಿಪಡಿಸುವುದು ಕೇಂದ್ರ ಸರ್ಕಾರದ ಕಾರ್ಯನೀತಿಗೆ ಒಳಪಟ್ಟಿರುತ್ತದೆ. ಆದುದರಿಂದ ರಾಜ್ಯ ಸರ್ಕಾರವು ಕೇವಲ ಬೆಂಬಲ ಬೆಲೆಗಳನ್ನು ಮಾತ್ರ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತದೆ.

ಆ) ಬೆಂಬಲ ಬೆಲೆಗಳನ್ನು ನಿಗಧಿಪಡಿಸುವುದು ಕೇಂದ್ರ ಸರ್ಕಾರದ ವ್ಯಾಪ್ತಿಗೆ ಒಳಪಟ್ಟಿರುವುದರಿಂದ ರಾಜ್ಯ ಸರ್ಕಾರವು ಸಮಿತಿಯನ್ನು ಇದಕ್ಕೆ ಪ್ರತ್ಯೇಕವಾಗಿ ರಚಿಸುವ ಅವಶ್ಯಕತೆ ಇರುವುದಿಲ್ಲ. ಆದರೆ ಕಬ್ಬಿನ ಬೆಲೆ ನಿಗಧಿಪಡಿಸಲು ರಾಜ್ಯ ಮಟ್ಟದಲ್ಲಿ ಒಂದು ಸಮಿತಿ ಇರುತ್ತದೆ.

ರಾಜ್ಯದ ಬಾಲ ಕಾರ್ಮಿಕರ ಕುರಿತು

1009 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಬಾಲ ಕಾರ್ಮಿಕರ ಸಂಖ್ಯೆ ಎಷ್ಟು;

ಆ) ಬಾಲ ಕಾರ್ಮಿಕರಿಂದ ಕೆಲಸ ಮಾಡಿಸುವುದು ಕಾನೂನು ಬಾಹಿರವಲ್ಲವೇ? ಹಾಗಿದ್ದಲ್ಲಿ ಈ ಬಗ್ಗೆ ತೆಗೆದುಕೊಂಡ ಕ್ರಮವೇನು?

ಇ) ಬಾಲ ಕಾರ್ಮಿಕರ ಕಲ್ಯಾಣದ ಬಗ್ಗೆ ಸರ್ಕಾರ ಗೊತ್ತುಪಡಿಸಿರುವ ಕಾರ್ಯ ಕ್ರಮಗಳೇನು;

ಈ) ಕಾನೂನು ಬಾಹಿರವಾಗಿ ಬಾಲ ಕಾರ್ಮಿಕರನ್ನು ದುಡಿಸುವ ಸಂಸ್ಥೆಗಳ ಮೇಲೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಸಿ. ಗುರುನಾಥ್ (ಕಾರ್ಮಿಕ ಸಚಿವರು) :

ಅ) 1981ರ ಜನಗತಿಯ ಪ್ರಕಾರ 11.17 ಲಕ್ಷ ಬಾಲ ಕಾರ್ಮಿಕರು ಇದ್ದಾರೆ.

1991ರ ಜನಗಣತಿ ಸರಿಖ್ಯೆ ಇನ್ನೂ ಪ್ರಕಟವಾಗಿಲ್ಲ. ಈ ಸಂಖ್ಯೆಯು ಸುಮಾರು 13 ಲಕ್ಷಗಳಿರಬಹುದು.

ಆ) ಹೌದು.